# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1199 |
| ಸದಸ್ಯರ ಹೆಸರು | ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭಾ ಕ್ಷೇತ್ರ) |
| ಉತ್ತರಿಸುವ ದಿನಾಂಕ | 13-03-2026 |
| ಉತ್ತರಿಸುವ ಸಚಿವರು | ಕೃಷಿ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಸಿರಿಧಾನ್ಯ ಉತ್ಪನ್ನಗಳಿಗೆ ಜಾಗತಿಕ ಮಾರುಕಟ್ಟೆ ಕಲ್ಪಿಸವ ನಿಟ್ಟಿನಲ್ಲಿ ಕೇಂದ್ರ ಸರ್ಕಾರದ ಸಹಯೋಗದೊಂದಿಗೆ ಹಮ್ಮಿಕೊಂಡಿರುವ ವಿಶೇಷ ಯೋಜನೆಗಳೇನು; | ರಾಜ್ಯದಲ್ಲಿ ಸಿರಿಧಾನ್ಯಗಳ ಉತ್ಪಾದನೆ ಹೆಚ್ಚಿಸುವ ಮತ್ತು ರೈತರಿಗೆ ಉತ್ತಮ ಮಾರುಕಟ್ಟೆ ಸಂಪರ್ಕ ಕಲ್ಪಿಸುವ ನಿಟ್ಟಿನಲ್ಲಿ ರಾಷ್ಟ್ರೀಯ ಆಹಾರ ಭದ್ರತೆ ಮತ್ತು ಪೌಷ್ಠಿಕ ಅಭಿಯಾನ ಕೇಂದ್ರ ಪುರಸ್ಕೃತ ಯೋಜನೆಯಡಿ ನ್ಯೂಟ್ರಿ ಸಿರಿಧಾನ್ಯಗಳ ಉಪಅಭಿಯಾನ (ಶ್ರೀ ಅನ್ನ) ಕಾರ್ಯಕ್ರಮವನ್ನು ಅನುಷ್ಠಾನ ಮಾಡಲಾಗುತ್ತಿದೆ.<br><br>ಸದರಿ ಕಾರ್ಯಕ್ರಮದಡಿ ಸಿರಿಧಾನ್ಯ ಉತ್ಪನ್ನಗಳಿಗೆ ಜಾಗತಿಕ ಮಾರುಕಟ್ಟೆ ಕಲ್ಪಿಸಲು ಈ ಕೆಳಗಿನ ಘಟಕಗಳನ್ನು ಅನುಷ್ಠಾನ ಮಾಡಲಾಗುತ್ತಿದೆ.<br><br>1. ಅಂತರಾಷ್ಟ್ರೀಯ ವಾಣಿಜ್ಯ ಮೇಳ<br>2. ಸಿರಿಧಾನ್ಯಗಳ ದೈನಂದಿನ ಬಳಕೆ ಕುರಿತು ವ್ಯಾಪಕ ಪ್ರಚಾರಕ್ಕಾಗಿ ರಾಜ್ಯ ಮಟ್ಟದ ಕಾರ್ಯಾಗಾರ<br>3. ಜಿಲ್ಲಾ ಮಟ್ಟದ ಸಿರಿಧಾನ್ಯ ಹಬ್ಬ<br>4. ಸಿರಿಧಾನ್ಯ ಸಂಸ್ಕರಣೆ/ ಮೌಲ್ಯ ಸರಪಳಿ ಕುರಿತು ಉತ್ಪಾದಕರು ಮಾರುಕಟ್ಟೆದಾರರ ಕಾರ್ಯಾಗಾರ<br>5. ಗ್ರಾಹಕರಿಗೆ ಅರಿವು ಮೂಡಿಸಲು ಸಿರಿಧಾನ್ಯ ರೋಡ್ ಶೋ<br><br>ಮುಂದುವರೆದು, ರಾಜ್ಯದಲ್ಲಿ ಸಾವಯವ ಮತ್ತು ಸಿರಿಧಾನ್ಯ ಉತ್ಪನ್ನಗಳಿಗೆ ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಮಾರುಕಟ್ಟೆ ಸಂಪರ್ಕ ಕಲ್ಪಿಸಿಕೊಡುವ ನಿಟ್ಟಿನಲ್ಲಿ 2017 ರಲ್ಲಿ ರಾಷ್ಟ್ರಮಟ್ಟದ ಸಾವಯವ ಮತ್ತು ಸಿರಿಧಾನ್ಯ ಮೇಳ, ನಂತರ 2018, 2019, 2023, 2024, 2025 ಹಾಗು 2026 ರಲ್ಲಿ ಅಂತರರಾಷ್ಟ್ರೀಯ ವಾಣಿಜ್ಯ ಮೇಳಗಳನ್ನು ಆಯೋಜಿಸಲಾಗಿರುತ್ತದೆ. |

| | | |
|---|---|---|
| ಆ) | ಅಂತರರಾಷ್ಟ್ರೀಯ ಕೃಷಿ ಮೇಳದಲ್ಲಿ ಕೇಂದ್ರ ಸಚಿವರು ಭರವಸೆ ನೀಡಿದಂತೆ ರಾಜ್ಯದ ಸಿರಿಧಾನ್ಯ ಬೆಳೆಗಾರರಿಗೆ ರಫ್ತು ಉತ್ತೇಜನ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಕರ್ನಾಟಕ ರಾಜ್ಯ ಕೃಷಿ ಉತ್ಪನ್ನಗಳ ಸಂಸ್ಕರಣೆ ಹಾಗೂ ರಫ್ತು ನಿಗಮ ನಿಯಮಿತ (ಕೆಪೆಕ್) ವತಿಯಿಂದ ಸಿರಿಧಾನ್ಯಗಳ ರಫ್ತಿಗಾಗಿ ಕೃಷಿ ರಫ್ತು ತರಬೇತಿ ಕಾರ್ಯಕ್ರಮ, ಜಿಲ್ಲಾ ಮಟ್ಟದ ಅರಿವು ಮೂಡಿಸುವ ಕಾರ್ಯಕ್ರಮ, ರಫ್ತು ಸಂಬಂಧಿತ ಕಾರ್ಯಾಗಾರ / ವಿಚಾರ ಸಂಕಿರಣ, ಬಿ2ಬಿ ಸಭೆಗಳು, ನವೋದ್ಯಮಿಗಳಿಗೆ ರಫ್ತು ಸಂಬಂಧಿತ ಸಲಹೆ / ಮಾರ್ಗದರ್ಶನ ನೀಡುವುದು ಈ ಮುಂತಾದ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. |
| ಇ) | ಸಿರಿಧಾನ್ಯ ಸಂಸ್ಕರಣಾ ಘಟಕಗಳನ್ನು (Processing Units) ಗ್ರಾಮೀಣ ಮಟ್ಟದಲ್ಲಿ ಸ್ಥಾಪಿಸುವ ಸಣ್ಣ ಮತ್ತು ಮಧ್ಯಮ ವರ್ಗದ ಉದ್ದಿಮೆದಾರರಿಗೆ ನೀಡಲಾಗುತ್ತಿರುವ ರಿಯಾಯಿತಿ ಮತ್ತು ಪ್ರೋತ್ಸಾಹಧನ ಎಷ್ಟು; | ➢ ಸಿರಿಧಾನ್ಯಗಳ ಸಂಸ್ಕರಣೆಗೆ ಉತ್ತೇಜನ ನೀಡುವ ಉದ್ದೇಶದೊಂದಿಗೆ ರೈತಸಿರಿ ಯೋಜನೆಯಡಿ ಸಿರಿಧಾನ್ಯಗಳ ಸಂಸ್ಕರಣೆ, ಮೌಲ್ಯವರ್ಧನೆ, ವರ್ಗೀಕರಣ, ಪ್ಯಾಕಿಂಗ್ ಮತ್ತು ಬ್ರ್ಯಾಂಡಿಂಗ್ ಯಂತ್ರೋಪಕರಣಗಳಿಗೆ ಒಟ್ಟು ಯಂತ್ರೋಪಕರಣಗಳ ವೆಚ್ಚದ ಮೇಲೆ ಶೇ.50 ರಷ್ಟು ಅಥವಾ ಗರಿಷ್ಠ ರೂ. 10.00 ಲಕ್ಷಗಳ ವರೆಗೆ ಸಹಾಯಧನವನ್ನು ನೀಡಲಾಗುತ್ತಿದೆ.<br><br>➢ ಸಿರಿಧಾನ್ಯ ಸಂಸ್ಕರಣಾ ಘಟಕಗಳನ್ನು (Processing Units) ಸ್ಥಾಪಿಸಲು ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಯೋಜನೆ (PMFME) ಅಡಿಯಲ್ಲಿ ಕಿರು ಆಹಾರ ಸಂಸ್ಕರಣಾ ಘಟಕಗಳ ಸ್ಥಾಪನೆಗೆ ಶೇ.35 ರಷ್ಟು ಸಾಲ ಸಂಪರ್ಕಿತ ಸಹಾಯಧನ, ರಾಜ್ಯ ಸರ್ಕಾರದಿಂದ ಹೆಚ್ಚುವರಿ ಶೇ.15 ರಷ್ಟು ಸಹಾಯಧನ, ಒಟ್ಟಾರೆ ಯೋಜನಾ ವೆಚ್ಚದ ಶೇ.50 ರಷ್ಟು ಸಹಾಯಧನ, ಗರಿಷ್ಠ ರೂ.15.00 ಲಕ್ಷಗಳನ್ನು ಒದಗಿಸಲಾಗುತ್ತಿದೆ. ಮುಂದುವರೆದು, ಸದರಿ ಯೋಜನೆಯಡಿ ರೈತ ಉತ್ಪಾದಕ ಸಂಸ್ಥೆಗಳಿಗೆ / ಸ್ವಸಹಾಯ ಸಂಘಗಳಿಗೆ ಸಿರಿಧಾನ್ಯಗಳ ಸಾಮಾನ್ಯ ಮೂಲಭೂತ ಸೌಕರ್ಯಗಳನ್ನು ಸ್ಥಾಪಿಸಲು ಶೇ.35 ರಷ್ಟು ಗರಿಷ್ಠ ರೂ.3.00 ಕೋಟಿ ವರೆಗೂ ಸಾಲ ಸಂಪರ್ಕಿತ ಸಹಾಯಧನ ನೀಡಲು ಅವಕಾಶವಿರುತ್ತದೆ. |

| | | |
|---|---|---|
| ಈ) | ಸಿರಿಧಾನ್ಯಗಳನ್ನು ಬೆಳೆಯುವ ರೈತರಿಗೆ ಕನಿಷ್ಠ ಬೆಂಬಲ ಬೆಲೆ (MSP) ನಿಗದಿಪಡಿಸುವಲ್ಲಿ ಮತ್ತು ಸಕಾಲಕ್ಕೆ ಖರೀದಿ ಕೇಂದ್ರಗಳನ್ನು ತೆರೆಯುವಲ್ಲಿ ಸರ್ಕಾರದ ನಿಲುವೇನು? | **ಕೃಷಿ ಇಲಾಖೆ:**<br>ಕೇಂದ್ರ ಸರ್ಕಾರವು ಪ್ರತಿ ವರ್ಷ ಮುಂಗಾರು ಹಂಗಾಮಿನಲ್ಲಿ 14 ಕೃಷಿ ಬೆಳೆಗಳಿಗೆ ಮತ್ತು ಹಿಂಗಾರು ಹಂಗಾಮಿನಲ್ಲಿ 6 ಕೃಷಿ ಉತ್ಪನ್ನಗಳಿಗೆ ಬೆಂಬಲ ಬೆಲೆಯನ್ನು ಘೋಷಣೆ ಮಾಡುತ್ತದೆ. ಇದರಲ್ಲಿ ಸಿರಿಧಾನ್ಯಗಳು (ರಾಗಿ ಮತ್ತು ಜೋಳ ಹೊರತುಪಡಿಸಿ) ಸೇರಿರುವುದಿಲ್ಲ.<br>ಆದರೆ ಕೇಂದ್ರ ಸರ್ಕಾರವು ದಿನಾಂಕ 09-08-2023ರ ಪತ್ರದಲ್ಲಿ ರಾಗಿಗೆ ನಿಗಧಿಪಡಿಸಿರುವ ಬೆಂಬಲ ಬೆಲೆ ದರದಲ್ಲಿಯೇ ಸಿರಿಧಾನ್ಯಗಳನ್ನು ಮೂರು ವರ್ಷಗಳ ಅವಧಿಗೆ (2023-24 ರಿಂದ) ಖರೀದಿಸಲು ಅನುಮತಿಸಲಾಗಿರುತ್ತದೆ.<br><br>ರಾಜ್ಯದಿಂದ ಸಿರಿಧಾನ್ಯಗಳಿಗೆ ಪ್ರತ್ಯೇಕವಾಗಿ ಬೆಂಬಲ ಬೆಲೆ ಘೋಷಣೆ ಮಾಡಲು ಕೇಂದ್ರ ಸರ್ಕಾರವನ್ನು ಕೋರಲಾಗಿದೆ.<br><br>**ಆಹಾರ, ನಾಗರೀಕ ಸರಬರಾಜು ವ್ಯವಹಾರಗಳು ಮತ್ತು ಕಾನೂನು ಮಾಪನಶಾಸ್ತ್ರ ಇಲಾಖೆ:**<br><br>ಕೇಂದ್ರ ಸರ್ಕಾರವು 2025-26 ನೇ ಸಾಲಿನ ಮುಂಗಾರು ಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ 6.00 ಲಕ್ಷ ಮೆಟ್ರಿಕ್ ಟನ್ ರಾಗಿಯನ್ನು ಖರೀದಿಸಲು ಅನುಮತಿಯನ್ನು ನೀಡಿರುತ್ತದೆ. ಅದರನ್ವಯ ಪ್ರತಿ ಕ್ವಿಂಟಾಲ್‌ಗೆ ರೂ.4886/- ರ ದರದಲ್ಲಿ ಪ್ರತಿ ರೈತರಿಂದ ಪ್ರತಿ ಎಕರೆಗೆ 10 ಕ್ವಿಂಟಾಲ್‌ನಂತೆ ಗರಿಷ್ಠ 50 ಕ್ವಿಂಟಾಲ್ ಖರೀದಿಸಲು ದಿನಾಂಕ:12.09.2025 ರಂದು ಆದೇಶ ಹೊರಡಿಸಲಾಗಿರುತ್ತದೆ.<br><br>ಅದರನ್ವಯ ದಿನಾಂಕ:15.12.2025 ರವರೆಗೆ 2,57,706 ರೈತರಿಂದ 6,00,043.550 ಮೆಟ್ರಿಕ್ ಟನ್ ರಾಗಿ ಪ್ರಮಾಣಕ್ಕೆ ನೋಂದಣಿಯಾಗಿರುತ್ತದೆ. ಪ್ರಸ್ತುತ ಖರೀದಿ ಪ್ರಕ್ರಿಯೆ ಚಾಲ್ತಿಯಲ್ಲಿದ್ದು, ದಿನಾಂಕ:06.03.2026 ರಲ್ಲಿದ್ದಂತೆ 41,038 ರೈತರಿಂದ 96352.700 ಮೆಟ್ರಿಕ್ ಟನ್ ರಾಗಿಯನ್ನು ಖರೀದಿಸಲಾಗಿರುತ್ತದೆ. |

| | | |
|---|---|---|
| | | **ಕಿರು ಸಿರಿಧಾನ್ಯ** - ಕೇಂದ್ರ ಸರ್ಕಾರವು 2025-26 ನೇ ಸಾಲಿನ ಮುಂಗಾರು ಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ 0.29 ಲಕ್ಷ ಮೆಟ್ರಿಕ್ ಟನ್ ಕಿರುಸಿರಿಧಾನ್ಯಗಳನ್ನು ಖರೀದಿಸಲು ಅನುಮತಿಯನ್ನು ನೀಡಿರುತ್ತದೆ. ಅದರನ್ವಯ ಪ್ರತಿ ಕ್ವಿಂಟಾಲ್‌ಗೆ ರೂ.4886/- ರ ದರದಲ್ಲಿ ಪ್ರತಿ ರೈತರಿಂದ ಪ್ರತಿ ಎಕರೆಗೆ 10 ಕ್ವಿಂಟಾಲ್‌ನಂತೆ ಗರಿಷ್ಠ 50 ಕ್ವಿಂಟಾಲ್ ಖರೀದಿಸಲು ದಿನಾಂಕ 15.09.2025 ರಂದು ಆದೇಶ ಹೊರಡಿಸಲಾಗಿರುತ್ತದೆ. ಅದರಂತೆ ದಿನಾಂಕ 15.01.2026 ರವರೆಗೆ 1233 ರೈತರಿಂದ 3422.450 ಮೆಟ್ರಿಕ್ ಟನ್ ಪ್ರಮಾಣಕ್ಕೆ ನೋಂದಣಿಯಾಗಿರುತ್ತದೆ. |

ಸಂಖ್ಯೆ: AGRI/50/ACT/2026

**(ಎನ್. ಚಲುವರಾಯಸ್ವಾಮಿ)**
ಕೃಷಿ ಸಚಿವರು